ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಶಿಕ್ಷಣ ಸಂಸ್ಥೆ ಹಾಗೂ ಸಿಬ್ಬಂದಿ ವರ್ಗ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

390 (479) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅನುದಾನರಹಿತ ಆಂಗ್ಲ/ಕನ್ನಡ ಮಾಧ್ಯಮ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸೇವಾ ಭದ್ರತೆ, ಮೂಲ ವೇತನ ಇತ್ಯಾದಿಗಳನ್ನು ಸರ್ಕಾರದ ಆದೇಶದಂತೆ ನೀಡಲಾಗುತ್ತಿದೆಯೇ ;

(ಇ) ಅನುದಾನಿತ ಶಾಲೆಗಳಲ್ಲಿ ಸಿಬ್ಬಂದಿಗಳಿಗೆ ತಡವಾಗಿ ವೇತನ ಪಾವತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರಿ ನೌಕರರಂತೆ ಅನುದಾನಿತ ಶಾಲೆಗಳ ಸಿಬ್ಬಂದಿಗಳಿಗೂ ಏಕಕಾಲದಲ್ಲಿ ವೇತನ ಪಾವತಿಸಲು ಕೈಗೊಳ್ಳಲಾದ ಕ್ರಮಗಳೇನು ;

(ಉ) ಅನುದಾನಿತ ಶಾಲೆಗಳ ಸಿಬ್ಬಂದಿಗಳಿಗೆ ವೈದ್ಯಕೀಯ ಭತ್ಯೆ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ವೈದ್ಯಕೀಯ ಭತ್ಯೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ?